ಇಲಾಖೆ / ವಿಷಯ: DEPARTMENT / SUBJECT: ಅಂತರಾಷ್ಟ್ರೀಯ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ

ದಿನಾಂಕ : DATE : 18/07/2019

# ಜಯದ ಭೂಷಣ

ಉವಾ 18/7/19

## ■ ಪಾಕಿಸ್ತಾನ ವಿರುದ್ಧ ಭಾರತಕ್ಕೆ 'ಅಂತಾರಾಷ್ಟ್ರೀಯ' ಜಯ
## ■ ಜಾಧವ್ ಮರಣದಂಡನೆ ಸದ್ಯ ಜಾರಿ ಮಾಡದಂತೆ ತೀರ್ಪು

**ದ ಹೇಗ್(ಹಾಲೆಂಡ್):** ಪಾಕಿಸ್ತಾನದಲ್ಲಿ ಅಕ್ರಮವಾಗಿ ಬಂಧಿ ಯಾಗಿರುವ ಭಾರತದ ನಿವೃತ್ತ ನೌಕಾ ಅಧಿಕಾರಿ ಕುಲಭೂಷಣ್ ಜಾಧವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಅಂತಾರಾಷ್ಟ್ರೀಯ ನ್ಯಾಯಾಲಯದಲ್ಲಿ (ಐಸಿಜೆ) ಭಾರತದ ವಾದಕ್ಕೆ ಐತಿಹಾಸಿಕ ಜಯ ಸಿಕ್ಕಿದೆ.

ಬುಧವಾರದ ಅಂತಿಮ ತೀರ್ಪಿನಲ್ಲಿ ಕುಲಭೂಷಣ್ ಜಾಧವ್ ಅವರಿಗೆ ಪಾಕಿಸ್ತಾನದ ಸೇನಾ ನ್ಯಾಯಾಲಯ ನೀಡಿರುವ ಮರಣ ದಂಡನೆ ಶಿಕ್ಷೆಯ ಪುನರ್ ಪರಿಶೀಲನೆ ಹಾಗೂ ನ್ಯಾಯಯುತವಾಗಿ ಸಿಗಬೇಕಿರುವ ಎಲ್ಲಾ ರಾಜತಾಂತ್ರಿಕ ನೆರವುಗಳೂ ದೊರೆಯಬೇಕು ಎಂದು ಐಸಿಜೆ ಮುಖ್ಯ ನ್ಯಾಯಮೂರ್ತಿ ಅಬ್ದುಲ್ ಖಾವಿ ಅಹ್ಮದ್ ಯೂಸುಫ್ ಆದೇಶಿಸಿದ್ದಾರೆ.

ಭಯೋತ್ಪಾದನೆ ಹಾಗೂ ಗೂಢಚರ್ಯೆ ಆರೋಪದಡಿ 2016ರ ಮಾ. 3ರಂದು ಪಾಕಿಸ್ತಾನದ ಭದ್ರತಾ ಪಡೆಗಳು ಜಾಧವ್ ಅವರನ್ನು ಬಂಧಿಸಿದ್ದವು. ಆನಂತರ ವಿಚಾರಣೆ ನಡೆದು, ಪಾಕಿಸ್ತಾನ ಸೇನಾ ನ್ಯಾಯಾಲಯವು 2017ರ ಏಪ್ರಿಲ್‌ನಲ್ಲಿ ಮರಣ ದಂಡನೆ ಶಿಕ್ಷೆ ವಿಧಿಸಿತ್ತು. ಇದರ ವಿರುದ್ಧ ಭಾರತ ಸರ್ಕಾರ, 2017ರ ಮೇ 18ರಂದು ಐಸಿಜೆ ಮೊರೆ ಹೋಗಿತ್ತು. ಇದೇ ವರ್ಷ ಫೆಬ್ರವರಿ 21ರಂದು ತೀರ್ಪಿನ ವಿಚಾರಣೆಯನ್ನು ಕಾಯ್ದಿರಿಸಿರುವುದಾಗಿ ನ್ಯಾಯಪೀಠ ಘೋಷಿಸಿತ್ತು.

**ವಿಯೆನ್ನಾ ಒಪ್ಪಂದದ ಉಲ್ಲಂಘನೆ:** ವಿಯೆನ್ನಾ ಒಪ್ಪಂದದ ಪ್ರಕಾರ, ಜಾಧವ್‌ರನ್ನು ಬಂಧಿಸಿದ ಕೂಡಲೇ ಭಾರತಕ್ಕೆ ಆ ಬಗ್ಗೆ ಪಾಕಿಸ್ತಾನ ಮಾಹಿತಿ ನೀಡಬೇಕಿತ್ತು. ಆದರೆ, 2016ರ ಮಾ. 3ರಂದು ಬಂಧಿಸಲಾಗಿದ್ದರೂ, ಬಂಧನದ ವಿಚಾರವನ್ನು ಮೂರು ವಾರಗಳ ನಂತರ ಭಾರತಕ್ಕೆ ತಿಳಿಸಲಾಗಿದೆ. ಇದೂ ವಿಯೆನ್ನಾ ಒಪ್ಪಂದದ ಉಲ್ಲಂಘನೆಯಾಗಿದೆ ಎಂದ ಅವರು, ಜಾಧವ್ ಅವರ ಭೇಟಿಗಾಗಿ ಭಾರತ ಮೇಲಿಂದ ಮೇಲೆ ಮನವಿ ಸಲ್ಲಿಸಿದರೂ ಅವನ್ನು ಪಾಕಿಸ್ತಾನ ಪುರಸ್ಕರಿಸಿಲ್ಲ, ಯಾವ ಕಾರಣಕ್ಕಾಗಿ ಭಾರತದ ಮನವಿಗಳನ್ನು ಸತತವಾಗಿ ತಿರಸ್ಕರಿಸಲಾಯಿತು ಎಂಬ ಬಗ್ಗೆ ಸಮರ್ಥ ಕಾರಣಗಳನ್ನು ನೀಡುವಲ್ಲಿ ಪಾಕಿಸ್ತಾನ ವಿಫಲವಾಗಿದೆ ಎಂದು ಅಭಿಪ್ರಾಯಪಟ್ಟರು.

**ಏನಿದು ವಿಯೆನ್ನಾ ಒಪ್ಪಂದ?:** ಒಂದು ದೇಶದ ರಾಜತಂತ್ರಜ್ಞರು, ಮತ್ತೊಂದು ದೇಶದಲ್ಲಿ (ಅದು ಶತ್ರು ರಾಷ್ಟ್ರವಾಗಿದ್ದರೂ ಸರಿ) ನಿರ್ಭೀತಿಯಿಂದ ರಾಜತಾಂತ್ರಿಕ ಕಾರ್ಯಭಾರಗಳನ್ನು ನಿರ್ವಹಿಸಲು ಅನುಕೂಲವಾಗುವಂಥ ವಾತಾವರಣ ನಿರ್ಮಿಸುವ ನಿಟ್ಟಿನಲ್ಲಿ ಆಸ್ಟ್ರೀಯಾದ ರಾಜಧಾನಿ ವಿಯೆನ್ನಾದಲ್ಲಿ 1961ರಲ್ಲಿ ಸಮ್ಮೇಳನ ನಡೆಸಲಾಗಿತ್ತು.

ಸಮ್ಮೇಳನದಲ್ಲಿ ನಡೆದ ಚರ್ಚೆಗಳ ಆಧಾರದಲ್ಲಿ ರೂಪಿಸಲಾದ ಕರಡು, ಅನೇಕ ಬಾರಿ ತಿದ್ದುಪಡಿಗೊಂಡು 1969ರಲ್ಲಿ ಅಂತಿಮ ಸ್ವರೂಪ ತಾಳಿತು. ಅದೇ ವರ್ಷ ಮೇ 23ರಂದು ಈ ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳಲಾಯಿತು. ಈ ಮಾರ್ಗಸೂಚಿಗಳಿಗೆ ವಿಯೆನ್ನಾ ಒಪ್ಪಂದಗಳು ಎಂದು ಹೆಸರಿಡಲಾಗಿದ್ದು ಎಲ್ಲಾ ರಾಷ್ಟ್ರಗಳಿಗೆ 1969ರ ಮೇ 23ರಿಂದಲೇ ಸಹಿ ಹಾಕಲು ಮುಕ್ತ ಅವಕಾಶ ನೀಡಲಾಯಿತು. ಸದ್ಯ ಭಾರತ, ಪಾಕಿಸ್ತಾನ ಸೇರಿ 116 ದೇಶಗಳು ಆ ಒಪ್ಪಂದಕ್ಕೆ ಸಹಿ ಹಾಕಿವೆ. ಆದರೆ, ಅಮೆರಿಕ ಹಾಕಿಲ್ಲ.

### ತೀರ್ಪಿನಿಂದ ಆಗಿದ್ದೇನು?



**ಭಾರತಕ್ಕೆ ಲಾಭ**

- 15:1 ಬಹುಮತದ ಆಧಾರದಲ್ಲಿ ತೀರ್ಪು
- ಜಾಧವ್ ವಿಚಾರಣೆಯ ಒಟ್ಟು ಪ್ರಕ್ರಿಯೆನ್ನು ಪಾಕ್ ಮರು ಪರಿಶೀಲನೆ ನಡೆಸಬೇಕು
- ವಿಯೆನ್ನಾ ಒಪ್ಪಂದದ ಅನುಚ್ಛೇದ 36 ಅನ್ನು ಪಾಕಿಸ್ತಾನ ಉಲ್ಲಂಘಿಸಿದೆ
- ಜಾಧವ್‌ಗೆ ರಾಜತಾಂತ್ರಿಕ ನೆರವು ಒದಗಿಸಬೇಕು

**ಪಾಕ್ ನಿಟ್ಟುಸಿರು**

- ಸೇನಾ ನ್ಯಾಯಾಲಯ ವಿಧಿಸಿದ ಗಲ್ಲು ಶಿಕ್ಷೆಯನ್ನು ರದ್ದುಗೊಳಿಸುವುದಕ್ಕೆ ಐಸಿಜೆ ನಿರಾಕರಣೆ
- ಜಾಧವ್ ಬಿಡುಗಡೆ ಮಾಡುವಂತೆ ಸೂಚಿಸಲೂ ಐಸಿಜೆ ಅಸಮ್ಮತಿ

> ಸತ್ಯ ಮತ್ತು ನ್ಯಾಯಕ್ಕೆ ಜಯವಾಗಿದೆ. ವಾಸ್ತವಾಂಶಗಳನ್ನು ವಿಸ್ತೃತವಾಗಿ ಅಧ್ಯಯನ ನಡೆಸಿ ತೀರ್ಪು ನೀಡಿದ್ದಕ್ಕೆ ಐಸಿಜೆಗೆ ಅಭಿನಂದನೆಗಳು. ಕುಲಭೂಷಣ್ ಜಾಧವ್‌ಗೆ ನ್ಯಾಯ ಸಿಗುತ್ತದೆ ಎಂಬ ವಿಶ್ವಾಸ ನನಗಿದೆ. ಪ್ರತಿಯೊಬ್ಬ ಭಾರತೀಯರ ಸುರಕ್ಷತೆ ಮತ್ತು ಕಲ್ಯಾಣಕ್ಕಾಗಿ ನಮ್ಮ ಸರ್ಕಾರ ಎಂದಿಗೂ ಶ್ರಮಿಸುತ್ತದೆ.
>
> • ನರೇಂದ್ರ ಮೋದಿ, ಪ್ರಧಾನಿ

> ಇದು ಭಾರತಕ್ಕೆ ಪ್ರಾಪ್ತವಾದ ದೊಡ್ಡ ವಿಜಯ. ಜಾಧವ್ ಕುಟುಂಬಕ್ಕೆ ಇದರಿಂದ ನೆಮ್ಮದಿಯಾಗಿದೆ. ಪ್ರಧಾನಿ ಮೋದಿಯವರು ಖುದ್ದಾಗಿ ಅಂತಾರಾಷ್ಟ್ರೀಯ ಕೋರ್ಟ್‌ನಲ್ಲಿ ಈ ವಿಚಾರ ಆದ್ಯತೆಯಲ್ಲಿ ಪ್ರಸ್ತಾಪವಾಗುವಂತೆ ಮಾಡಿದ್ದರು. ಜತೆಗೆ ಹಿರಿಯ ನ್ಯಾಯವಾದಿ ಹರೀಶ್ ಸಾಳ್ವೆ ಕೂಡ ಉತ್ತಮ ರೀತಿಯಲ್ಲಿ ವಾದ ಮಂಡಿಸಿದ್ದರು.
>
> • ಸುಷ್ಮಾ ಸ್ವರಾಜ್, ಕೇಂದ್ರದ ಮಾಜಿ ಸಚಿವೆ

18